ನ್ಯಾಯಾಲಯಗಳಿಗೆ ಸ್ವಂತ ಕಟ್ಟಡ

203 ಶ್ರೀ ಆರ್.ಧ್ರುವನಾರಾಯಣ್

ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು

ಅ) ಕೊಳ್ಳೇಗಾಲ ಮತ್ತು ಯಳಂದೂರು ತಾಲ್ಲೂಕು ನ್ಯಾಯಾಲಯಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರಕ್ಕೆ ಬಂದಿದೆಯೇ?

ಕೊಳ್ಳೇಗಾಲದಲ್ಲಿನ ನ್ಯಾಯಾಲಯವು ತನ್ನ ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಆದರೆ, ಯಳಂದೂರಿನ ನ್ಯಾಯಾಲಯವು ಮಿನಿವಿಧಾನಸೌಧದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ತನ್ನದೇ ಆದ ಕಟ್ಟಡ ಹೊಂದಿಲ್ಲ.

ಆ) ಹಾಗಿದ್ದಲ್ಲಿ, ಈ ನ್ಯಾಯಾಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಯಾವ ಕ್ರಮ ತೆಗೆದುಕೊಂಡಿದೆ.

ಹೆಚ್ಚುವರಿ ನ್ಯಾಯಾಲಯದ ಕಟ್ಟಡವನ್ನು ನಿರ್ಮಿಸಲು ರಿಜಿಸ್ಟ್ರಾರ್ ಜನರಲ್ ರವರು 2009-10ನೇ ಸಾಲಿನ ಅಪೆಂಡಿಕ್ಸ್-ಇನಲ್ಲಿ ಕಾಮಗಾರಿಗಳನ್ನು ಸೇರಿಸುವ ಪ್ರಸ್ತಾವನೆ ಬಂದಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸ್ಥಳ ಪರಿಶೀಲನೆ ನಡೆದಿದ್ದು, ನಿವೇಶನವನ್ನು ಗುರುತಿಸಿಲಾಗಿದೆಯೇ?

ಈ ಬಗ್ಗೆ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರು ಚಾಮರಾಜನಗರ ಇವರಿಂದ ವಿವರವಾದ ಪ್ರಸ್ತಾವನೆ ನಿರೀಕ್ಷಿಸಲಾಗಿದೆ ಎಂದು ರಿಜಿಸ್ಟ್ರಾರ್ ಜನರಲ್ ರವೆರು ತಿಳಿಸಿರುತ್ತಾರೆ.

ಈ) ಹಾಗಿದ್ದಲ್ಲಿ, ಈ ತಾಲ್ಲೂಕು ನ್ಯಾಯಾಲಯಗಳಿಗೆ ಎಲ್ಲಿ ನಿವೇಶನಗಳನ್ನು ಗುರುತಿಸಲಾಗಿದೆ?

ಯಳಂದೂರು ನ್ಯಾಯಾಲಯದ ಕಟ್ಟಡಕ್ಕಾಗಿ ಭೂಸ್ವಾಧೀನ ಕ್ರಮ ಪ್ರಗತಿಯಲ್ಲಿದೆ.

205 ಶ್ರೀ ಆರ್.ಧ್ರುವನಾರಾಯಣ್.

ಮಾನ್ಯ ಸಾರಿಗೆ ಸಚಿವರು.

ಅ) ಚಾಮರಾಜನಗರ ಜಿಲ್ಲೆಗೆ – ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ಕಛೇರಿ ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ;

ಇಲ್ಲ.

ಆ) ಬಿಳಿಗಿರಿ ರಂಗನ ಬೆಟ್ಟದ ಬಸ್ ನಿಲ್ದಾಣಕ್ಕಾಗಿ ಜಾಗ ಲಭ್ಯವಿದ್ದರೂ ಬಸ್‌ನಿಲ್ದಾಣದ ನಿರ್ಮಾಣ ತಡವಾಗುತ್ತಿರುವುದಕ್ಕೆ ಕಾರಣಗಳೇನು;

ಬಿಳಿಗಿರಿರಂಗನ ಬೆಟ್ಟದಲ್ಲಿ ಬಸ್‌ನಿಲ್ದಾಣ ನಿರ್ಮಾಣಕ್ಕಾಗಿ ಕಂದಾಯ ಇಲಾಖೆಗೆ ಸೇರಿದ 24 ಗುಂಟೆ ನಿವೇಶನವನ್ನು ಗುರುತಿಸಲಾಗಿದ್ದು, ಸದರಿ ನಿವೇಶನವನ್ನು ನಿಗಮದ ವಶಕ್ಕೆ ಪಡೆಯಲು ಕ್ರಮ ಕೈಗೊಳ್ಳಲಾಗಿದೆ. ನಿವೇಶನವು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವಶಕ್ಕೆ ಬಂದ ನಂತರ ಬಸ್‌ನಿಲ್ದಾಣ ನಿರ್ಮಿಸಲು ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಇ) ಕೊಳ್ಳೇಗಾಲ ಹಾಗೂ ಯಳಂದೂರು ಪಟ್ಟಣಗಳಲ್ಲಿ ಬಸ್‌ನಿಲ್ದಾಣಗಳ ನಿರ್ಮಾಣಕ್ಕಾಗಿ ಯಾವ ಕ್ರಮ ಕೈಗೊಳ್ಳಲಾಗಿದೆ;

ಕೊಳ್ಳೇಗಾಲ ಹಾಗೂ ಯಳಂದೂರು ಪಟ್ಟಣಗಳಲ್ಲಿ ಬಸ್ ನಿಲ್ದಾಣ ನಿರ್ಮಿಸಲು ಸೂಕ್ತ ನಿವೇಶನಕ್ಕಾಗಿ ಕಂದಾಯ ಇಲಾಖೆಯೊಡನೆ ವ್ಯವಹರಿಸಲಾಗುತ್ತಿದೆ. ಸೂಕ್ತ ನಿವೇಶನಗಳು ನಿಗಮದ ವಶಕ್ಕೆ ಬಂದ ನಂತರ ಬಸ್‌ನಿಲ್ದಾಣಗಳನ್ನು ನಿರ್ಮಿಸಲು ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಈ) ಬೆಂಗಳೂರು ಮತ್ತು ಮೈಸೂರಿನಿಂದ ಕೊಳ್ಳೇಗಾಲಕ್ಕೆ ರಾಜಹಂಸ ಬಸ್‌ಗಳು ಸಂಚರಿಸಲು ಸಂಸ್ಥೆಯು ಯಾವಾಗ ತೀರ್ಮಾನ ತೆಗೆದುಕೊಳ್ಳುತ್ತದೆ?

ಬೆಂಗಳೂರಿನಿಂದ ಹಾಗೂ ಮೈಸೂರಿನಿಂದ ಕೊಳ್ಳೇಗಾಲಕ್ಕೆ ರಾಜಹಂಸ ಸಾರಿಗೆಯನ್ನು ಒದಗಿಸಿಕೊಡುವಂತೆ ಸಾರ್ವಜನಿಕರಿಂದ ಬೇಡಿಕೆ ಬಂದಿರುವುದಿಲ್ಲ.

206 ಶ್ರೀ.ಧ್ರುವನಾರಾಯಣ.ಆರ್. (ಕೊಳ್ಳೇಗಾಲ)

ಮಾನ್ಯ ಲೋಕೋಪಯೋಗಿ ಸಚಿವರು

ಅ. ಲೆಕ್ಕ ಶೀರ್ಷಿಕೆ 5054 (ಅಪೆಂಡಿಕ್ಸ್–E) ರಲ್ಲಿ ರಸ್ತೆ ಮತ್ತು ಸೇತುವೆಗಳ ನಿರ್ಮಾಣಕ್ಕೆ ಹಾಗೂ ಕಟ್ಟಡಗಳ ನಿರ್ಮಾಣ ಕಾಮಗಾರಿಗಳಿಗಾಗಿ 2008–09ರಲ್ಲಿ ನಿಗದಿಪಡಿಸಲಾದ ಅನುದಾನವೆಷ್ಟು?

2008–09ನೇ ಸಾಲಿನಲ್ಲಿ ಲೆ.ಶೀ.5054–(ಯೋಜನೆ) (ಅಪೆಂಡಿಕ್ಸ್–ಇ) ಯಡಿ ರಸ್ತೆ ಮತ್ತು ಸೇತುವೆಗಳ ನಿರ್ಮಾಣ ಕಾಮಗಾರಿಗಳಿಗಾಗಿ ರೂ.55743.70ಲಕ್ಷಗಳು ಹಾಗೂ ಕಟ್ಟಡಗಳ ನಿರ್ಮಾಣ ಕಾಮಗಾರಿಗಳಿಗಾಗಿ ರೂ.45429.37ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದ್ದು ವಿವರವನ್ನು ಅನುಬಂಧ–1ರಲ್ಲಿ ಒದಗಿಸಲಾಗಿದೆ.